ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 24/05/2019


# ಚಿಂಚೋಳಿ ಗೆಲುವು: ಬಿಜೆಪಿ ಬಲ 107ಕ್ಕೆ

## ಕುಂದಗೋಳದಲ್ಲಿ ಕಾಂಗ್ರೆಸ್‌ನ ಕುಸುಮಾ | ಚಿಂಚೋಳಿಯಲ್ಲಿ ಅವಿನಾಶ್ ಜಯಭೇರಿ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ/ಕಲಬುರಗಿ 24/5/19

ರಾಜ್ಯದ ಗಮನ ಸೆಳೆದಿದ್ದ ಕುಂದಗೋಳ ಹಾಗೂ ಚಿಂಚೋಳಿ ವಿಧಾನಸಭಾ ಉಪ ಚುನಾವಣೆ ಫಲಿತಾಂಶ ಸಹ ಗುರುವಾರ ಪ್ರಕಟವಾಗಿದ್ದು, ಬಿಜೆಪಿ ಹಾಗೂ ಮೈತ್ರಿ ಪಕ್ಷ ತಲಾ ಒಂದೊಂದು ಸ್ಥಾನದಲ್ಲಿ ಗೆಲುವು ದಾಖಲಿಸಿದೆ. ಈ ಮೂಲಕ ವಿಧಾನಸಭೆಯಲ್ಲಿ ಬಿಜೆಪಿ ಸಂಖ್ಯಾಬಲ 107(2 ಪಕ್ಷೇತರ ಸೇರಿ) ಕ್ಕೇರಿದಂತಾಗಿದೆ.



ಕುಂದಗೋಳದಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಅಭ್ಯರ್ಥಿ ಕುಸುಮಾವತಿ ಶಿವಳ್ಳಿ ಪ್ರಯಾಸದ ಗೆಲುವು ಸಾಧಿಸಿದರೆ, ಚಿಂಚೋಳಿಯಲ್ಲಿ ಡಾ.ಅವಿನಾಶ್ ಜಾಧವ್ ಗೆಲುವಿನ ನಗೆ ಬೀರಿದ್ದಾರೆ.

ಪೌರಾಡಳಿತ ಸಚಿವ, ಕಾಂಗ್ರೆಸ್ ಮುಖಂಡ ಸಿ.ಎಸ್. ಶಿವಳ್ಳಿ ನಿಧನದಿಂದ ತೆರವಾಗಿದ್ದ ಕುಂದಗೋಳ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಯಾಗಿ ಶಿವಳ್ಳಿ ಪತ್ನಿ ಕುಸುಮಾವತಿ ಅವರನ್ನು ಕಣಕ್ಕಿಳಿಸಿದ್ದರೆ, ಪ್ರತಿಸ್ಪರ್ಧಿಯಾಗಿ ಮಾಜಿ ಶಾಸಕ ಎಸ್.ಐ.ಚಿಕ್ಕನಗೌಡರ ಸ್ಪರ್ಧಿಸಿದ್ದರು. ಕ್ಷೇತ್ರದಲ್ಲಿ ಚಲಾವಣೆಯಾದ ಒಟ್ಟು 1,55,989 ಮತಗಳ ಪೈಕಿ 77587 ಮತ ಕುಸುಮಾವತಿ ಪಡೆದರೆ, ಎದುರಾಳಿ 75976 ಮತ ಪಡೆದರು. ಈ ಮೂಲಕ ಒಟ್ಟು 1664 ಮತಗಳ ಅಂತರದಿಂದ ಕುಸುಮಾವತಿ ಜಯಭೇರಿ ಬಾರಿಸಿದರು.



**ತಂದೆಯ ಸ್ಥಾನಕ್ಕೆ ಮಗ:** ಡಾ.ಉಮೇಶ್ ಜಾಧವ್ ಅವರಿಂದ ತೆರವಾಗಿದ್ದ ಚಿಂಚೋಳಿ ವಿಧಾನಸಭಾ ಕ್ಷೇತ್ರಕ್ಕೆ ನಡೆದ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧಿಸಿದ್ದ ಅವರ ಪುತ್ರ ಡಾ.ಅವಿನಾಶ್ ಜಾಧವ್ 8,030 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಪ್ರತಿಸ್ಪರ್ಧಿ ಮೈತ್ರಿ ಅಭ್ಯರ್ಥಿ ಸುಭಾಷ ರಾಠೋಡ 61,079 ಮತಗಳನ್ನು ಪಡೆದರೆ, ಅವಿನಾಶ್ 69,109 ಮತಗಳನ್ನು ಪಡೆದಿದ್ದಾರೆ. ಈ ಮೂಲಕ ಅವಿನಾಶ್ ಇದೇ ಮೊದಲ ಬಾರಿ ವಿಧಾನಸಭೆಗೆ ಕಾಲಿಟ್ಟಿದ್ದಾರೆ.